ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಂತ್ರಿಗಳು) : ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2010ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

(6-20 PM)

4) ಕರ್ನಾಟಕ ಸ್ಟಾಂಪು (ಎರಡನೇ ತಿದ್ದುಪಡಿ) ವಿಧೇಯಕ 2010

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಜಿ. ಕರುಣಾಕರ ರೆಡ್ಡಿ (ಕಂದಾಯ ಸಚಿವರು) : ಮಾನ್ಯ ಅಧ್ಯಕ್ಷರು 2010ರ ಕರ್ನಾಟಕ ಸ್ಟಾಂಪು (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ "2010ರ ಕರ್ನಾಟಕ ಸ್ಟ್ಯಾಂಪು (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು :

ಖಂಡ : 2 ರಿಂದ 4 ರವರೆಗೆ

ಅಧ್ಯಕ್ಷರು : "ಖಂಡ 2 ರಿಂದ 4 ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

(ಖಂಡ 2 ರಿಂದ 4 ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ : 1 ಇತ್ಯಾದಿ :

ಅಧ್ಯಕ್ಷರು : ಪ್ರಸ್ತಾವ ಏನೆಂದರೆ "ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

(ಮೊದಲನೆಯ ಖಂಡ, ದೀರ್ಘಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮ ಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಜಿ.ಕರುಣಾಕರ ರೆಡ್ಡಿ (ಕಂದಾಯ ಸಚಿವರು) : ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ಸ್ಟ್ಯಾಂಪು (ಎರಡನೇ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "2010ರ ಕರ್ನಾಟಕ ಸ್ಟಾಂಪು (ಎರಡನೇ ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

5) ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕ 2010

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಜಗದೀಶ್ ಶೆಟ್ಟರ್ (ಮಾನ್ಯ ಗ್ರಾಮೀಣಾಭಿವೃದ್ಧಿ ಸಚಿವರು) (ಮಾನ್ಯ ಸಾರಿಗೆ ಸಚಿವರ ಪರವಾಗಿ) : ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "2010ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು :

ಖಂಡ 2 ರಿಂದ 8ರವರೆಗೆ :

ಅಧ್ಯಕ್ಷರು : "ಖಂಡ 2 ರಿಂದ 8ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 8ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)